## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಹೆಚ್.ಎಸ್.ಪ್ರಕಾಶ್‌ಕುಮಾರ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ ಮತ್ತು ಇನ್ನಿತರ 5 ಮಂದಿ ಆರೋಪಿತರ ವಿರುದ್ಧ ಇಲಾಖಾ ವಿಚಾರಣೆ – ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ.

ಓದಲಾಗಿದೆ.

1. ಸರ್ಕಾರದ ಪತ್ರ ಸಂಖ್ಯೆ. ಗ್ರಾಅಪ 418 ಜಿಪಅ 2012 ದಿನಾಂಕ 10–10–2012.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರ ಪತ್ರ ಸಂಖ್ಯೆ. ಜಿಪಂಕೋ /ಸಿಸಿಎ/ ಸಿಆರ್.40(ಎ) 2012–13 ದಿನಾಂಕ 30–10–2012.
3. ಕಾರಣ ಕೇಳುವ ನೋಟೀಸ್ ಸಂಖ್ಯೆ. ಗ್ರಾಅಪ 418 ಜಿಪಅ 2012 ದಿನಾಂಕ. 28–12–2012
4. ಶ್ರೀ ಎಂ.ಡಿ.ಮುದ್ದುಕೃಷ್ಣಮೂರ್ತಿ, ಶ್ರೀ ಟಿ.ವೆಂಕಟಾಚಲಯ್ಯ, ಶ್ರೀ ಎಸ್. ಸುಂದರರಾಜ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು [ಪ್ರಸ್ತುತ ಕಾರ್ಯಪಾಲಕ ಇಂಜಿನಿಯರ್‌ಗಳು] ಕ್ರಮವಾಗಿ ದಿನಾಂಕ 02–03–2013, 02–02–2013 ಮತ್ತು 11–02–2013 ರಂದು ಸಲ್ಲಿಸಿರುವ ಲಿಖಿತ ಹೇಳಿಕೆ.

ಪ್ರಸ್ತಾವನೆ:

ಕೋಲಾರ ಜಿಲ್ಲೆ. ಬಂಗಾರುಪೇಟೆ ತಾಲ್ಲೂಕಿನ ಸುಂದರಪಾಳ್ಯ ಮತ್ತ ಮುಳಬಾಗಿಲು ತಾಲ್ಲೂಕಿನ ತಾಯಲೂರು ಗ್ರಾಮಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣ ಕಾಮಗಾರಿ ಅಂದಾಜು ಮೊತ್ತ ಕ್ರಮವಾಗಿ ರೂ. 19.36 ಲಕ್ಷಗಳು ಮತ್ತು ರೂ. 18,95 ಲಕ್ಷಗಳಿಗೆ ಸೆಪ್ಟಂಬರ್ 2000 ರಲ್ಲಿ ಆಡಳಿತಾತ್ಮಕ ಅನುಮೋದನೆಯಾಗಿದ್ದು, ಜನವರಿ 2001ರಲ್ಲಿ ತಾಂತ್ರಿಕ ಮಂಜೂರಾತಿ ನೀಡಲಾಗಿದೆ. ಸದರಿ ಕಾಮಗಾರಿಗಳನ್ನು ಜನವರಿ 2003ರೊಳಗಾಗಿ ಪೂರ್ಣಗೊಳಿಸಲು ಕಾಲಾವಕಾಶ ನಿಗದಿಪಡಿಸಲಾಗಿತ್ತು. ಆದರೆ, ಕಾಮಗಾರಿಗಳ ತಪಾಸಣೆಯನ್ನು ಅಧಿಕಾರಿಗಳು ಆಗಿಂದಾಗ್ಗೆ ನಿರ್ವಹಿಸದ ಕಾರಣ, ಕಟ್ಟಡ ನಿರ್ಮಾಣದಲ್ಲಿ ವಿಳಂಬವಾಗಿ ಸುಮಾರು ರೂ. 18.22 ಲಕ್ಷಗಳ ಅಧಿಕ ವೆಚ್ಚ ತಗಲಿರುವುದಲ್ಲದೆ ಗ್ರಾಮೀಣ ಪ್ರದೇಶಗಳ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿದ್ಯಾರ್ಥಿಗಳಿಗೆ ನಿಗದಿತ ಸಮಯದಲ್ಲಿ ಸುಧಾರಿತ ವಿದ್ಯಾಭ್ಯಾಸ ಸೌಲಭ್ಯಗಳನ್ನು ದೊರಕದಂತೆ ಮಾಡಲು ಕಾರಣರಾದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕೆಂದು ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ 2010–11ನೇ ಸಾಲಿನ ವರದಿಯಲ್ಲಿ ಸಮಿತಿಯು ಶಿಫಾರಸ್ಸು ಮಾಡಿದ್ದರ ಹಿನ್ನೆಲೆಯಲ್ಲಿ, ಈ ಪ್ರಕರಣದಲ್ಲಿ ಮೇಲ್ಕಂಡ ಕಾಮಗಾರಿಗಳು ವಿಳಂಬವಾಗಲು ಕಾರಣರಾದ ಅಧಿಕಾರಿ / ನೌಕರರ ವಿರುದ್ಧ ದೋಷಾರೋಪಣಾ ಪಟ್ಟಿ (ಅನುಬಂಧ–1 ರಿಂದ 4) ಯನ್ನು ಸಲ್ಲಿಸುವಂತೆ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 10–10–2012ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ರವರವನ್ನು ಕೋರಲಾಗಿತ್ತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ರವರು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 30–10–2012 ರಲ್ಲಿ ಈ ಕೆಳಕಂಡ ಅಧಿಕಾರಿಗಳ ವಿರುದ್ಧ ದೋಷಾರೋಪಣಾ ಪಟ್ಟಿ (ಅನುಬಂಧ–1 ರಿಂದ 4) ಯನ್ನು ಸಲ್ಲಿಸಿದ್ದರು:-

----2

(1) ಶ್ರೀ ಹೆಚ್.ಎಸ್.ಪ್ರಕಾಶ್‌ಕುಮಾರ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ

(2) ಶ್ರೀ ಪಿ. ಮುನಿಕೃಷ್ಣ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ

(3) ಶ್ರೀ ಬಿ.ಎಸ್.ಶಿವಕುಮಾರ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ

(4) ಶ್ರೀ ಎ.ವಿ.ಪುಟ್ಟಸ್ವಾಮಿ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ

(5) ಶ್ರೀ ಎಂ.ಡಿ.ಮುದ್ದುಕೃಷ್ಣಮೂರ್ತಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಂಗಾರಪೇಟೆ

(6) ಶ್ರೀ ಟಿ.ವೆಂಕಟಾಚಲಯ್ಯ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಂಗಾರಪೇಟೆ

(7) ಶ್ರೀ ಎಂ.ಆರ್.ಅಶ್ವಥ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಳಬಾಗಿಲು.

(8) ಶ್ರೀ ಎಸ್. ಸುಂದರರಾಜ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಳಬಾಗಿಲು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ರವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿನ 8 ಮಂದಿ ಅಧಿಕಾರಿಗಳ ಪೈಕಿ ಕ್ರಮ ಸಂಖ್ಯೆ (2)ರಲ್ಲಿನ ಶ್ರೀ ಪಿ. ಮುನಿಕೃಷ್ಣ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ ಮತ್ತು ಕ್ರಮ ಸಂಖ್ಯೆ (4)ರಲ್ಲಿನ ಶ್ರೀ ಎ.ವಿ.ಪುಟ್ಟಸ್ವಾಮಿ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ ಇವರುಗಳು ಸೇವೆಯಿಂದ ವಯೋ ನಿವೃತ್ತಿ ಹೊಂದಿದ್ದರಿಂದ ಇವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಕೆ.ಸಿ.ಎಸ್.ಆರ್. ನಿಯಮ 214ರನ್ವಯ ಅವಕಾಶವಿಲ್ಲದಿರುವುದರಿಂದ ಸದರಿಯವರುಗಳ ವಿರುದ್ಧ ಸಿವಿಲ್ ದಾವೆ ಹೂಡಿ ಸರ್ಕಾರಕ್ಕೆ ಉಂಟಾದ ನಷ್ಟವನ್ನು ಲೆಕ್ಕಾಚಾರ ಮಾಡಿ ವಸೂಲಿ ಮಾಡಲು ಹಾಗೂ ಉಳಿದ 6 ಮಂದಿ ಅಧಿಕಾರಿಗಳಿಗೆ ಸರ್ಕಾರದಿಂದ ನೀಡಲ್ಪಟ್ಟ ಕಾರಣ ಕೇಳುವ ನೋಟೀಸ್‌ನೊಂದಿಗೆ ದೋಷಾರೋಪಣಾ ಪಟ್ಟಿ (ಅನುಬಂಧ-1 ರಿಂದ 4) ಗಳನ್ನು ಜಾರಿ ಮಾಡಿ, ಸ್ವೀಕೃತಿಯನ್ನು ಪಡೆದು ಸಲ್ಲಿಸುವಂತೆ ಮೇಲೆ ಕ್ರಮ ಸಂಖ್ಯೆ(3)ರಲ್ಲಿ ಓದಲಾದ ದಿನಾಂಕ. 28-12-2012ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರಿಗೆ ನಿರ್ದೇಶನ ನೀಡಲಾಗಿತ್ತು.

ಸರ್ಕಾರದ ಕಾರಣ ಕೇಳುವ ನೋಟೀಸಿಗೆ ಶ್ರೀ ಎಂ.ಡಿ.ಮುದ್ದುಕೃಷ್ಣಮೂರ್ತಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಂಗಾರಪೇಟೆ [ಹಾಲಿ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಮಗಳೂರು], ಶ್ರೀ ಟಿ.ವೆಂಕಟಾಚಲಯ್ಯ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಂಗಾರಪೇಟೆ [ಹಾಲಿ

ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ವಿಭಾಗ, ಕೋಲಾರ] ಮತ್ತು ಶ್ರೀ ಎಸ್. ಸುಂದರರಾಜ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಳಬಾಗಿಲು [ಹಾಲಿ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ] ಇವರುಗಳು ಮಾತ್ರ ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ವಿವಿಧ ದಿನಾಂಕಗಳಂದು ಲಿಖಿತ ಸಮಜಾಯಿಷಿ ಸಲ್ಲಿಸಿ, ಅವರುಗಳ ವಿರುದ್ಧ ಮಾಡಲಾದ ಆರೋಪಗಳನ್ನು ನಿರಾಕರಿಸಿರುತ್ತಾರೆ. ಉಳಿದಂತೆ, ಶ್ರೀ ಹೆಚ್.ಎಸ್.ಪ್ರಕಾಶ್‌ಕುಮಾರ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ, ಶ್ರೀ ಬಿ.ಎಸ್. ಶಿವಕುಮಾರ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ ಮತ್ತು ಶ್ರೀ ಎಂ.ಆರ್.ಅಶ್ವಥ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಳಬಾಗಿಲು ಇವರುಗಳು ಲಿಖಿತ ಸಮಜಾಯಿಷಿ ಸಲ್ಲಿಸಿರುವುದಿಲ್ಲ. ಈ ಆರೋಪಿತ ಅಧಿಕಾರಿಗಳಿಗೆ ಕಾರಣ ಕೇಳುವ ನೋಟೀಸಿಗೆ ನೀಡಲಾದ ಅವಧಿಯು ಮುಗಿದಿರುವುದರಿಂದ, ಸದರಿಯವರುಗಳ ವಿರುದ್ಧ ಮಾಡಲಾದ ಆರೋಪಗಳಿಗೆ ಅವರ ಲಿಖಿತ ಹೇಳಿಕೆ ಏನೂ ಇಲ್ಲವೆಂದು ಭಾವಿಸಿ, ಪ್ರಕರಣದಲ್ಲಿನ ಸತ್ಯಾಸತ್ಯತೆಯನ್ನು ತಿಳಿಯುವ ಸಂಬಂಧ, ಆರೋಪಿತ 6 ಮಂದಿ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ನಿರ್ಧರಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

<u>ಆದೇಶ ಸಂಖ್ಯೆ : ಗ್ರಾಅಪ 418 ಜಿಪಅ 2012 ಬೆಂಗಳೂರು, ದಿನಾಂಕ 15-04-2013</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮತ್ತು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 13ರನ್ವಯ ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಕೋಲಾರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ:-

1. *ಶ್ರೀ ಹೆಚ್.ಎಸ್.ಪ್ರಕಾಶ್‌ಕುಮಾರ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ*
2. *ಶ್ರೀ ಬಿ.ಎಸ್. ಶಿವಕುಮಾರ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ*
3. *ಶ್ರೀ ಎಂ.ಡಿ.ಮುದ್ದುಕೃಷ್ಣಮೂರ್ತಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಂಗಾರಪೇಟೆ*
4. *ಶ್ರೀ ಟಿ.ವೆಂಕಟಾಚಲಯ್ಯ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಂಗಾರಪೇಟೆ*
5. *ಶ್ರೀ ಎಂ.ಆರ್.ಅಶ್ವಥ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಳಬಾಗಿಲು.*
6. *ಶ್ರೀ ಎಸ್. ಸುಂದರರಾಜ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಳಬಾಗಿಲು.*

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಲ್ಲಿ ನಿಗಧಿಪಡಿಸಿರುವ ಕಾರ್ಯ ವಿಧಾನದ ಪ್ರಕಾರ ನಡೆಸಿ ವರದಿಯನ್ನು ನಾಲ್ಕು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಜಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1& 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ.
6. ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.1242, 8ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-560 040 (ದೂರವಾಣಿ ಸಂಖ್ಯೆ. 23394245)
7. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಕೋಲಾರ - ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
8. ಸಂಬಂಧಿಸಿದ ಅಧಿಕಾರಿಗಳಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರ ಮುಖಾಂತರ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
10. ಮಾನ್ಯ ಉಪ ಮುಖ್ಯ ಮಂತ್ರಿಯವರ (ಕಂದಾಯ ಮತ್ತು ಗ್ರಾ.ಅ.ಪಂ.ರಾಜ್ ಖಾತೆ) ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
12. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
13. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.